ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಶ್ರೀ ಮುನಿರಾಜುಗೌಡ ಪಿ.ಎಂ

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1302

ಉತ್ತರಿಸಬೇಕಾದ ದಿನಾಂಕ : 08-03-2022

ಉತ್ತರಿಸಬೇಕಾದ ಸಚಿವರು : ಸಹಕಾರ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಕೊರೋನಾ 1ನೇ ಅಲೆ ಮತ್ತು 2ನೇ ಅಲೆಯಲ್ಲಿ ಮೃತಪಟ್ಟ ರೈತರ ಪೈಕಿ ಎಷ್ಟು ಜನ ಸಹಕಾರ ಸಂಘಗಳಲ್ಲಿ ಸಾಲ ಪಡೆದವರಿದ್ದಾರೆ;	ರಾಜ್ಯದಲ್ಲಿ ಕೊರೋನಾ 1ನೇ ಅಲೆ ಮತ್ತು 2ನೇ ಅಲೆಯಲ್ಲಿ ಮೃತಪಟ್ಟ ರೈತರ ಪೈಕಿ 10,437 ರೈತರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು (ಪ್ಯಾಕ್ಸ್), ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳು (ಡಿಸಿಸಿ) ಮತ್ತು ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್(ಪಿಕಾರ್ಡ್)ಗಳಲ್ಲಿ ಸಾಲ ಪಡೆದಿರುತ್ತಾರೆ.
ಆ)	ಕೊರೋನಾದಿಂದ ಮೃತಪಟ್ಟಿರುವ ರೈತರು ಸಹಕಾರ ಸಂಘಗಳಲ್ಲಿ ಪಡೆದಿದ್ದ ಒಟ್ಟು ಸಾಲದ ಎಷ್ಟು ಮೊತ್ತ ಬಾಕಿ ಇದೆ;	ಈ ರೈತರ ಕೃಷಿ ಸಾಲದ ಮೊತ್ತ ರೂ. 91.97 ಕೋಟಿಗಳಾಗಿರುತ್ತವೆ.
ಇ)	ಕೊರೋನಾದಿಂದ ಮೃತಪಟ್ಟ ರೈತರು ಸಹಕಾರ ಸಂಘಗಳಲ್ಲಿ ಮಾಡಿದ್ದ ಸಾಲದ ಮೊತ್ತವನ್ನು ಮನ್ನಾ ಮಾಡಲು ಸರ್ಕಾರದಿಂದ ಆದೇಶ ನೀಡಲಾಗಿದೆಯೇ; ನೀಡಿದ್ದಲ್ಲಿ, ಸರ್ಕಾರಿ ಆದೇಶದ ಪ್ರತಿ ಒದಗಿಸುವುದು.	ಕೊರೋನಾದಿಂದ ಮೃತಪಟ್ಟ ರೈತರು ಸಹಕಾರ ಸಂಘಗಳಲ್ಲಿ ಪಡೆದಿದ್ದ ಸಾಲದ ಮೊತ್ತವನ್ನು ಮನ್ನಾ ಮಾಡಲು ಆದೇಶ ಹೊರಡಿಸಿರುವುದಿಲ್ಲ.
ಈ)	ಇಲ್ಲದಿದ್ದಲ್ಲಿ, ಕೊರೋನಾದಿಂದ ಮೃತಪಟ್ಟ ರೈತರು ಸಹಕಾರ ಸಂಘಗಳಲ್ಲಿ ಪಡೆದಿದ್ದ ಸಾಲ ಮನ್ನಾ ಮಾಡುವುದರ ಜೊತೆಗೆ ಜೀವನೋಪಾಯಕ್ಕಾಗಿ ಅವರ ಕುಟುಂಬಕ್ಕೆ ಮತ್ತೆ ಸಾಲ ಸೌಲಭ್ಯ ಸಿಗುವಂತೆ ಮಾಡುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು?	ಕೊರೋನಾದಿಂದ ಸಂಕಷ್ಟದಲ್ಲಿರುವ ಮತ್ತು ಮೃತಪಟ್ಟ ರೈತರ ಕುಟುಂಬಗಳಿಗೆ ನೆರವಾಗಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ. 1. ಕೋವಿಡ್-19 ಸೋಂಕಿನಿಂದ ಮೃತಪಟ್ಟ ರೈತರು ಒಳಗೊಂಡಂತೆ ಎಲ್ಲಾ ಕುಟುಂಬಗಳಿಗೂ ಸಹ ಕೇಂದ್ರ ಸರ್ಕಾರದಿಂದ ಪ್ರತೀ ಮೃತ ಸದಸ್ಯನಿಗೆ ರೂ.50,000/- ಮತ್ತು ರಾಜ್ಯ ಸರ್ಕಾರದಿಂದ ದುಡಿಯುವ ಸದಸ್ಯನನ್ನು ಕಳೆದುಕೊಂಡ ಬಡತನ ರೇಖೆಗಿಂತ ಕೆಳಗಿರುವ ಕುಟುಂಬದ ಒಬ್ಬ ಕಾನೂನು ಬದ್ಧ ವಾರಸುದಾರನಿಗೆ ರೂ.1.00 ಲಕ್ಷಗಳ ಆರ್ಥಿಕ ನೆರವನ್ನು ನೀಡುವ ಯೋಜನೆ ಕಂದಾಯ ಇಲಾಖೆಯಿಂದ ಜಾರಿಗೊಳಿಸಲಾಗಿದೆ. 2. ಕೋವಿಡ್-19 ನ 2ನೇ ಅಲೆಯ ಪರಿಣಾಮವಾಗಿ ರೈತರು ಸಹಕಾರ ಸಂಘಗಳಲ್ಲಿ ದಿ:01.03.2021 ರಿಂದ

		ದಿ:30.06.2021 ರ ಅವಧಿಯಲ್ಲಿ ಮರುಪಾವತಿಗೆ ಬರುವ ಸಾಲದ ಕಂತುಗಳನ್ನು ಮರುಪಾವತಿಸಲು ಕಂತುಗಳ ಅವಧಿಯನ್ನು ವಿಸ್ತರಿಸಲಾಗಿದ್ದು, ಸಂಬಂಧಿಸಿದ ಬಡ್ಡಿ ಸಹಾಯಧನವನ್ನು ರಾಜ್ಯ ಸರ್ಕಾರವೇ ಭರಿಸಲಾಗುತ್ತಿದೆ. ಈ ಯೋಜನೆಯು ಕೋವಿಡ್-19 ನಿಂದ ಮೃತ ಪಟ್ಟ ರೈತರ ವಾರಸುದಾರರಿಗೂ ಸಹ ಅನ್ವಯವಾಗುತ್ತದೆ.

ಸಂಖ್ಯೆ : ಸಿಒ 82 ಸಿಎಲ್‌ಎಸ್ 2022

(ಎಸ್. ಟಿ. ಸೋಮಶೇಖರ್)

ಸಹಕಾರ ಸಚಿವರು